# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 78 (34) |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | ದಿನಾಂಕ: 09.12.2024 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಹಾರ ಪದಾರ್ಥಗಳು ಆಕರ್ಷಕವಾಗಿ ಕಾಣಲು ಮತ್ತು ರುಚಿಕರವಾಗಿರಲು ಆಹಾರ ತಯಾರಕರು ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಅತಿ ಹೆಚ್ಚು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ) | ಬಂದಿದ್ದಲ್ಲಿ, ಈ ರೀತಿಯ ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಷೇಧವಿದ್ದರೂ ಇವುಗಳನ್ನು ಬಳಸಿ ಆಹಾರ ತಯಾರಿಸಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು; (ವಿವರ ನೀಡುವುದು) | The Food Safety and Standards Act, 2006 ರ ನಿಯಮ 3 (1)(zz)(viii) ಮತ್ತು The Food Safety and Standards (Food Products Standards and Food Additives) Regulations, 2011 ರ ನಿಯಮ 16.0ಗಳಡಿ ಸಿದ್ಧಪಡಿಸಿದ ಆಹಾರ ತಯಾರಿಕೆಯಲ್ಲಿ ಅನುಮೋದಿತವಲ್ಲದ ಕೃತಕ ಬಣ್ಣಗಳನ್ನು ಉಪಯೋಗಿಸಲು ಅವಕಾಶವಿರುವುದಿಲ್ಲ.<br><br>ಸಂಬಂಧಿಸಿದಂತೆ ಗೋಬಿ ಮಂಚೂರಿ, ಕಾಟನ್ ಕ್ಯಾಂಡಿ ಮತ್ತು ಕಬಾಬ್‌ನ ತಯಾರಿಕೆಯಲ್ಲಿ ಕೃತಕ ಬಣ್ಣಗಳ ಉಪಯೋಗಿಸುವುದು ಕಂಡುಬಂದ ಹಿನ್ನೆಲೆಯಲ್ಲಿ ಸದರಿ ಆಹಾರ ಪದಾರ್ಥಗಳ ತಯಾರಿಕೆಯಲ್ಲಿ ಯಾವುದೇ ಕೃತಕ ಬಣ್ಣಗಳನ್ನು ಉಪಯೋಗಿಸದಂತೆ ಸಲಹಾ ಪ್ರಕಟಣೆಯನ್ನು (Advisory) ಉದ್ದಿಮೆದಾರರ ಮತ್ತು ಸಾರ್ವಜನಿಕರ ಗಮನಕ್ಕೆ ಪತ್ರಿಕಾ ಮಾಧ್ಯಮಗಳ ಮೂಲಕ ತರಲಾಗಿರುತ್ತದೆ. ಇಲಾಖಾಧಿಕಾರಿಗಳು ಪರಿಶೀಲನಾ ಭೇಟಿ ನೀಡುವ ಸಂದರ್ಭದಲ್ಲಿ ಮತ್ತು ಸಭೆಗಳನ್ನು ಆಯೋಜಿಸಿ ಆಹಾರ ಉದ್ದಿಮೆದಾರರಿಗೆ ಈ ಕುರಿತಂತೆ ಅರಿವು ಮೂಡಿಸಲಾಗುತ್ತಿರುತ್ತದೆ.<br><br>ಅಲ್ಲದೆ ಆಹಾರ ತಯಾರಿಕೆಯಲ್ಲಿ ಅನುಸರಿಸಬೇಕಾದ ನಿಯಮಗಳು ಮತ್ತು ನಿಬಂಧನೆಗಳ ಕುರಿತಂತೆ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ನಿಗದಿಪಡಿಸಿರುವ Food Safety Training and Certification (FoSTaC) **ತರಬೇತಿಯನ್ನು** ಪ್ರಸಕ್ತ ಸಾಲಿನಲ್ಲಿ ಹೋಟೆಲ್‌ಗಳು, |

| | | |
|---|---|---|
| | | ದರ್ಶಿನಿಗಳು ಮತ್ತು ಬೀದಿಬದಿ ವ್ಯಾಪಾರಸ್ಥರು ಸೇರಿದಂತೆ 4664 ಆಹಾರ ಉದ್ದಿಮೆದಾರರು ಪಡೆದುಕೊಂಡಿರುತ್ತಾರೆ.<br>ಮುಂದುವರೆದು, ಪ್ರಸಕ್ತ ಸಾಲಿನಲ್ಲಿ ಕೃತಕ ಬಣ್ಣಗಳ ಉಪಯೋಗಿಸುವಿಕೆಯನ್ನು ಪತ್ತೆ ಹಚ್ಚಲು ವಿಶೇಷ ಆಂದೋಲನಗಳನ್ನು ಕೈಗೊಳ್ಳುವ ಮೂಲಕ 1187 ಆಹಾರ ಮಾದರಿಗಳನ್ನು ವಿಶ್ಲೇಷಣೆಗೊಳಪಡಿಸಲಾಗಿದ್ದು, ಅಸುರಕ್ಷಿತ ಎಂದು ವರದಿಯಾಗಿರುವ ಆಹಾರ ಮಾದರಿಗಳ ತಯಾರಕರು/ ಮಾರಾಟಗಾರರ ವಿರುದ್ಧ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ 43 ಮೊಕದ್ದಮೆಗಳನ್ನು ದಾಖಲಿಸಲಾಗಿದ್ದು, ಕಾನೂನು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಇ) | ಈ ರೀತಿಯ ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಗಾ ವಹಿಸಬೇಕಾದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಗಾ ವಹಿಸಲು ತೊಂದರೆಯಾಗದಿರುವಂತೆ ಪ್ರಸ್ತುತ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ಅಧಿಕಾರಿ/ಸಿಬ್ಬಂದಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಎರವಲು/ ನಿಯೋಜನೆ/ಅನ್ಯಪರ ಸೇವೆಯ ಮೇಲೆ ಪಡೆಯಲಾಗುತ್ತಿದೆ.<br>ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿನ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಆಕುಕ 109 ಎಸ್‌ಬಿವಿ 2024

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು